ವಿಷಯ:- ಸಿಂಧನೂರು ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 487 (100)

ಶ್ರೀ ಕೆ.ವಿರೂಪಾಕ್ಷಪ್ಪ (ಸಿಂಧನೂರು):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕಿನ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕೊರತೆ ನಿವಾರಣೆಗೆ ಸರ್ಕಾರದವರ ಕ್ರಮ ಏನು?

ಇ) ಸಿಂಧನೂರು ತಾಲ್ಲೂಕಿನಲ್ಲಿ ಸುಮಾರು 30 ಗ್ರಾಮಗಳಿಗೆ ಹಳ್ಳಿಗಳಿಗೆ ಶಾಲೆಗಳಿಲ್ಲ ದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಈ ಕುರಿತು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಖಾಲಿ ಶಿಕ್ಷಕರ ಹುದ್ದೆ ಕೊರತೆ ನಿವಾರಿಸಲು ಸರ್ಕಾರ ಈ ಕೆಳಕಂಡ ಕ್ರಮ ಕೈಗೊಂಡಿದೆ.

ಅ. 1995-96ನೇ ಸಾಲಿನಲ್ಲಿ 47 ಶಿಕ್ಷಕರನ್ನು ಭರ್ತಿ ಮಾಡಿದೆ.

ಆ. ತೀರ ಅಗತ್ಯವಿದ್ದ ಶಾಲೆಗಳಿಗೆ ನಿಯೋಜಿಸಿ ವಿದ್ಯಾರ್ಥಿಗಳಿಗೆ ತೊಂದರೆ ಆಗದಂತೆ ಕ್ರಮ ಕೈಗೊಂಡಿದೆ.

ಇ. 1996-97ನೇ ಸಾಲಿನ ನೇಮಕಾತಿಯಲ್ಲಿ 81 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ.

ಇ) ಬಂದಿದೆ.

ಈ) ತಾಲ್ಲೂಕಿನಲ್ಲಿ 29 ಶಾಲಾ ರಹಿತ ಗ್ರಾಮಗಳನ್ನು ಗುರ್ತಿಸಿದ್ದು, ಅವುಗಳಲ್ಲಿ 13 ಗ್ರಾಮಗಳಿಗೆ ಡಿ.ಪಿ.ಇ.ಪಿ.ಯೋಜನೆಯಡಿ ಶಾಲೆಗಳನ್ನು ನೀಡಲಾಗಿದೆ. ಉಳಿದ 16 ಹಳ್ಳಿಗಳಿಗೆ 1996-97ನೇ ಸಾಲಿನಲ್ಲಿ ಶಾಲೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಮಾನ್ಯತೆ ಪಡೆಯದ ಶಾಲಾ ಕಾಲೇಜುಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 488 (842)

ಶ್ರೀ ಎನ್.ಯೋಗೀಶ್ ಭಟ್ (ಮಂಗಳೂರು):- ಮಾನ್ಯ ಪ್ರಾಥಮಿಕ ಹಾಗೂ

ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮಾನ್ಯತೆ ಪಡೆಯದ ಶಾಲಾ ಕಾಲೇಜುಗಳನ್ನು ಮುಚ್ಚಲಾಗುವುದೇ.

ಆ) ಹಾಗಿದ್ದಿರೆ 1995-96 ಮತ್ತು 1996-97ನೇ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಶಾಲೆಗಳನ್ನು ಹಾಗೂ ಕಾಲೇಜುಗಳನ್ನು ಮುಚ್ಚಲಾಗಿದೆ.

ಇ) ಸದರಿ ಶಾಲಾ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆಯಾಗದ ರೀತಿ ಸರ್ಕಾರದವರು ಕೈಗೊಳ್ಳುವ ಕ್ರಮಗಳನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಹೌದು

ಆ) 1995-96ನೇ ಶೈಕ್ಷಣಿಕ ವರ್ಷದಲ್ಲಿ 18 ಪದವಿ ಪೂರ್ವ ಕಾಲೇಜುಗಳನ್ನು ಮುಚ್ಚಲಾಗಿದೆ. 1996-97ನೇ ಶೈಕ್ಷಣಿಕ ವರ್ಷದಲ್ಲಿ 6 ಪದವಿ ಪೂರ್ವ ಕಾಲೇಜುಗಳು ಇದ್ದು ಅವುಗಳನ್ನು ಮುಚ್ಚಲು ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ.

ಇ) ಪ್ರಾಥಮಿಕ : ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಹಿತದೃಷ್ಟಿಯಿಂದ ಗಂಭೀರವಾಗಿ ಪರಿಗಣಿಸಿ ಶಾಲಾ ವರ್ಗಾವಣೆ ಪತ್ರಗಳ ಮೇಲೆ ಮೇಲು ಸಹಿ ಮಾಡಿ ವಿದ್ಯಾರ್ಥಿಗಳು ಅಧಿಕೃತ ಶಾಲೆಗಳಲ್ಲಿ ಹಾಜರಾಗಲು ಮುಕ್ತ ಕ್ರಮ ಕೈಗೊಳ್ಳಲಾಗಿದೆ. ಹಾಗೂ ಅಧಿಕೃತ ಶಾಲೆಗಳ ಮೂಲಕ ಪರೀಕ್ಷೆಗೆ ಹಾಜರು ಆಗಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. ಸದರಿ ಪದವಿ ಪೂರ್ವ ಕಾಲೇಜುಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಲಿಗೆ ತೊಂದರೆಯಾಗದಂತೆ ಹತ್ತಿರದ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾಭ್ಯಾಸವನ್ನು ಮುಂದುವರೆಸುವಂತೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ವಿಷಯ:- ತಾಲ್ಲೂಕು ಪಂಚಾಯತಿಗಳಿಗೆ ಜೀಪುಗಳನ್ನು ಒದಗಿಸುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 489 (256)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ):- ಮಾನ್ಯ ಗ್ರಾಮಾಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಲ್ಲೂಕು ಪಂಚಾಯಿತಿಗಳಿಗೆ ಜೀಪುಗಳನ್ನು ಒದಗಿಸಲಾಗುವುದೆಂದು ಸರ್ಕಾರವು ಈ ಹಿಂದೆ ಭರವಸೆ ನೀಡಿದೆಯೇ ಹಾಗಿದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ.

ಆ) ಶಿಕಾರಿಪುರ ತಾಲ್ಲೂಕು ಪಂಚಾಯಿತಿಗೆ ಜೀಪು ಇಲ್ಲದೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಜೀಪು ಒದಗಿಸಲು ತೊಂದರೆ ಏನಿದೆ. ಯಾವಾಗ ಒದಗಿಸಲಾಗುವುದು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮಾಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):-